"ಇ-ಮೇಲ್ ಮುಖಾಂತರ"

**ಕರ್ನಾಟಕ ಸರ್ಕಾರ**
**ಸಮಾಜ ಕಲ್ಯಾಣ ಇಲಾಖೆ**
**ಸಹಾಯಕ ನಿರ್ದೇಶಕರು(ಗ್ರೇಡ್-1) ರವರ ಕಛೇರಿ, ಸಮಾಜ ಕಲ್ಯಾಣ ಇಲಾಖೆ,**
**ಬೆಂಗಳೂರು ದಕ್ಷಿಣ ತಾಲ್ಲೂಕು.ಎಸ್ ಕರಿಯಪ್ಪ ಮುಖ್ಯರಸ್ತೆ, ಬನಶಂಕರಿ, ಬೆಂಗಳೂರು 560070**

**ದೂರವಾಣಿ ಸಂಖ್ಯೆ: 080-26711096** **EmailId tswobloresouth@gmail.com**

ಸನಿ/ಸಕಇ/ಬೆಂ(ದ)/ಮ.ನಂ.ವಿವೇ&ಇತರ/ಸಿ.ಆರ್- 07/2026-27 ದಿನಾಂಕ :- 17-06-2026.

**ಗೆ**
**ಬೆಂಗಳೂರು ದಕ್ಷಿಣ ತಾಲ್ಲೂಕು ವ್ಯಾಪ್ತಿಯಲ್ಲಿ ಬರುವ**
**ಎಲ್ಲಾ ಕಾಲೇಜು ಪ್ರಾಂಶುಪಾಲರುಗಳಿಗೆ ಹಾಗೂ CRP**
**ಗಳ ಮುಖಾಂತರ ಎಲ್ಲಾ ಶಾಲಾ ಮುಖ್ಯೋಪಾಧ್ಯಾಯರುಗಳಿಗೆ.**

**ಮಾನ್ಯರೇ,**

ವಿಷಯ:- 2026-27 ನೇ ಸಾಲಿಗೆ ಸಮಾಜ ಕಲ್ಯಾಣ ಇಲಾಖೆಯಿಂದ ಅನುಷ್ಠಾನ ಮಾಡಲಾಗುತ್ತಿರುವ ವಿದ್ಯಾರ್ಥಿವೇತನ , ಪ್ರೋತ್ಸಾಹಧನ ಕಾರ್ಯಕ್ರಮಗಳಡಿ ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿಗಳನ್ನು ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದಲ್ಲಿ ನೋಂದಣಿ ಮಾಡಿಸುವ ವಗ್ಗೆ.

ಉಲ್ಲೇಖ:- SSP ಮತ್ತು ಇಲಾಖಾ ವೆಬ್ ಪೋರ್ಟಲ್ ನಲ್ಲಿ ಅರ್ಜಿಯನ್ನು ಸಲ್ಲಿಸಲು ಅವಕಾಶ ಕಲ್ಪಿಸಿರುವಂತೆ.

**********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2026-27 ನೇ ಸಾಲಿಗೆ ಸಂಬಂಧಿಸಿದಂತೆ **ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ** ವಿದ್ಯಾರ್ಥಿಗಳ ಮೆಟ್ರಿಕ್ ಪೂರ್ವ/ಮೆಟ್ರಿಕ್ ನಂತರ/ ಪ್ರೋತ್ಸಾಹಧನ ಕಾರ್ಯಕ್ರಮಕ್ಕೆ ಸಂಬಂಧಿಸಿದಂತೆ ಅರ್ಜಿಗಳನ್ನು ಆಹ್ವಾನಿಸಲಾಗಿದ್ದು ಸಂಬಂಧಪಟ್ಟ ಶಾಲಾ/ಕಾಲೇಜು ಮುಖ್ಯಸ್ಥರು/INO/Empowerment Officer ಗಳು ಈ ಕೆಳಕಂಡಂತೆ ಕ್ರಮ ವಹಿಸಬೇಕಾಗಿರುತ್ತದೆ.

1. ವಿದ್ಯಾರ್ಥಿವೇತನ , ಪ್ರೋತ್ಸಾಹಧನ ಕಾರ್ಯಕ್ರಮಗಳಿಗೆ ಸಂಬಂಧಿಸಿದಂತೆ ವಿದ್ಯಾಸಂಸ್ಥೆಯ ಎಲ್ಲಾ ಅರ್ಹ ವಿದ್ಯಾರ್ಥಿಗಳು ಕಡ್ಡಾಯವಾಗಿ ಅರ್ಜಿ ಸಲ್ಲಿಸಲು ಕ್ರಮ ವಹಿಸುವುದು. ಹಾಗೂ ಎಲ್ಲಾ ಪರಿಶಿಷ್ಟ ಜಾತಿ ಮತ್ತು ವರ್ಗದ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಿರುವ ಬಗ್ಗೆ ಖಾತ್ರಿ ಪಡಿಸಿಕೊಳ್ಳುವುದು .

   ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸಲು ವೆಬ್ ಸೈಟ್ ವಿಳಾಸ:- https://ssp.postmatric.karnataka.gov.in
   ಪ್ರೋತ್ಸಾಹಧನಕ್ಕೆ ಅರ್ಜಿ ಸಲ್ಲಿಸಲು ವೆಬ್ ಸೈಟ್ ವಿಳಾಸ:- **https://swdservices.karnataka.gov.in(FOR SC)**
   ಪ್ರೋತ್ಸಾಹಧನಕ್ಕೆ ಅರ್ಜಿ ಸಲ್ಲಿಸಲು ವೆಬ್ ಸೈಟ್ ವಿಳಾಸ:- https://twd.karnataka.gov.in **(FOR ST)**

2. ಶಾಲಾ ಮತ್ತು ಕಾಲೇಜುಗಳಲ್ಲಿ INO/Empowerment Officer ಗಳ ನೇಮಕಾತಿಗೆ ಕ್ರಮ ವಹಿಸುವುದು ಹಾಗೂ ಈಗಾಗಲೇ INO/Empowerment Officer ಗಳು ನೇಮಕವಾಗಿದಲ್ಲಿ ಆಯಾ **ಶಾಲೆಯ INO** ಗಳು ತಮ್ಮ ಲಾಗಿನ್‌ನಲ್ಲಿ ಲಭ್ಯವಿರುವ ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳ ಪಟ್ಟಿಯನ್ನು ಪರಿಶೀಲಿಸಿ ಅರ್ಜಿ ಸಲ್ಲಿಸಲು, ಆಧಾರ್ ಸೀಡ್ ಆಗದೇ ಇರುವ ವಿದ್ಯಾರ್ಥಿಗಳಿಗೆ ಆಧಾರ್ ಸೀಡ್ NPCI ಮಾಡಿಸಲು ಮತ್ತು ಬಯೋಮೆಟ್ರಿಕ್ –ಇ ದೃಢೀಕರಣಕ್ಕೆ ಅಗತ್ಯ ಕ್ರಮ ವಹಿಸುವುದು. ಅದರಂತೆಯೇ **ಕಾಲೇಜಿನ Empowerment Officer** ಗಳು ಎಲ್ಲಾ ವಿದ್ಯಾರ್ಥಿಗಳ

CamScanner

ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸಲು ತಿಳಿಸಿ ಕಾಲೇಜಿನಲ್ಲಿಯೇ ಅವಕಾಶ ಕಲ್ಪಿಸುವುದು ಹಾಗೂ ಲಾಗಿನ್ ನಲ್ಲಿ ಲಭ್ಯವಿರುವ ಮಾಹಿತಿಯನ್ನು ಆಗಾಗ ಪರಿಶೀಲಿಸಿ ವಿದ್ಯಾರ್ಥಿಗಳ ಆಧಾರ್ ಸೀಡಿಂಗ್ ಮತ್ತು ಬಯೋಮೆಟ್ರಿಕ್ –ಇ ದೃಢೀಕರಣಕ್ಕೆ ಕ್ರಮವಹಿಸುವುದು.

3. E-Attestation ಅಗತ್ಯವಿರುವ ವಿದ್ಯಾರ್ಥಿಗಳಿಗೆ ದಾಖಲಾತಿಗಳನ್ನು UPLOAD ಮಾಡಲು ಆಯಾ ವಿದ್ಯಾರ್ಥಿಗಳ ಲಾಗಿನ್‌ನಲ್ಲಿಯೇ ಅವಕಾಶ ಕಲ್ಪಿಸಲಾಗಿದ್ದು, ವಿದ್ಯಾರ್ಥಿಗಳಿಗೆ ಈ ಬಗ್ಗೆ ತಿಳಿಸುವುದು

4. ವಿದ್ಯಾರ್ಥಿವೇತನ ಮತ್ತು ಪ್ರೋತ್ಸಾಹಧನ ಕಾರ್ಯಕ್ರಮದಡಿ ಮಂಜೂರಾದ ಪ್ರೋತ್ಸಾಹಧನ ಮೊತ್ತವನ್ನು ವಿದ್ಯಾರ್ಥಿಯ ಆಧಾರ್ ಜೋಡಿತ ಬ್ಯಾಂಕ್ ಖಾತೆಗೆ ನೇರವಾಗಿ ಜಮ ಮಾಡಲಾಗುತ್ತಿದ್ದು, ಈ ಸಂಬಂಧ **ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗೆ ಆಧಾರ್ ಸೀಡೀಂಗ್ ಮತ್ತು NPCI ಮ್ಯಾಪಿಂಗ್** ಆಗಿರುವ ಬಗ್ಗೆ ಹಾಗೂ ಆಧಾರ್ ಮತ್ತು **ಬ್ಯಾಂಕ್ ಖಾತೆ Active** ಆಗಿರುವ ಬಗ್ಗೆ ಆಧಾರ್ ಸೇವಾ ಕೇಂದ್ರ ಮತ್ತು ಬ್ಯಾಂಕ್ ನಲ್ಲಿ ಪರಿಶೀಲಿಸಲು ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡುವುದು.

5. ಕೇಂದ್ರ ಸರ್ಕಾರವು 2025-26 ನೇ ಸಾಲಿನಿಂದ ವಿದ್ಯಾರ್ಥಿಗಳು ಹಾಗೂ INO/Empowerment Officer ಗಳ ಆಧಾರ್ ಬಯೋಮೆಟ್ರಿಕ್ ದೃಡೀಕರಣವನ್ನು ಹಾಗೂ ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ (9 ಮತ್ತು 10 ನೇ ತರಗತಿ) ಅನೈರ್ಮಲ್ಯ ವೃತ್ತಿಯಲ್ಲಿ ತೊಡಗಿರುವ ಪೋಷಕರ ಮಕ್ಕಳಿಗೆ ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮದಡಿ ಅರ್ಜಿ ಸಲ್ಲಿಸಿದ ಎಲ್ಲಾ **ಪರಿಶಿಷ್ಟ ಜಾತಿ** ವಿದ್ಯಾರ್ಥಿಗಳಿಗೆ ಬಯೋಮೆಟ್ರಿಕ್ ಇ- ದೃಢೀಕರಣ /NSP OTR ಕಡ್ಡಾಯವಾಗಿರುತ್ತದೆ. ಆದಕಾರಣ ಅರ್ಜಿ ಸಲ್ಲಿಸಿರುವ ಎಲ್ಲಾ ವಿದ್ಯಾರ್ಥಿಗಳಿಗೆ ಆಧಾರ್ ಬಯೋಮೆಟ್ರಿಕ್ ಇ- ದೃಢೀಕರಣ NSP OTR ಮಾಡಿಸಲು ಸೂಚನೆಗಳನ್ನು ನೀಡುವುದು.

6. 2025-26 ನೇ ಸಾಲಿಗೆ ಸರ್ಕಾರಿ ಮತ್ತು ಖಾಸಗಿ ವೈದ್ಯಕೀಯ ,ದಂತ ವೈದ್ಯಕೀಯ ಮತ್ತು ಇಂಜಿನಿಯರಿಂಗ್ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳು ಅದೇ ಸರ್ಕಾರಿ/ಖಾಸಗಿ ವಸತಿ ನಿಲಯಗಳಲ್ಲಿ ಪ್ರವೇಶ ಪಡೆದಿದ್ದಲ್ಲಿ ವಸತಿನಿಲಯದ ವೆಚ್ಚವಾಗಿ ಪ್ರತೀ ಮಾಹೆ ರೂ. 3500/-ಗಳನ್ನು ಪಾವತಿಸಲು ಸರ್ಕಾರದ ಆದೇಶವಿದ್ದು, ಈ ಕುರಿತು ವಿದ್ಯಾರ್ಥಿಗಳಿಗೆ ಮಾಹಿತಿ ನೀಡಿ ತಮ್ಮ ವಿದ್ಯಾರ್ಥಿನಿಲಯಗಳಲ್ಲಿ ಅವಶ್ಯಕತೆ ಇರುವ ವಿದ್ಯಾರ್ಥಿಗಳಿಗೆ ಅವಕಾಶ ಕಲ್ಪಿಸಿ **ಮಾಹಿತಿಯನ್ನು SSP HMIS ತಂತ್ರಾಂಶದಲ್ಲಿ ಅಳವಡಿಸಲು** ಅಗತ್ಯ ಕ್ರಮವಹಿಸುವುದು.

7. 2025-26 ನೇ ಸಾಲಿನಿಂದ **ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ಮೆಟ್ರಿಕ್ ಪೂರ್ವ (9 & 10)** ಹಾಗೂ **ಮೆಟ್ರಿಕ್ ನಂತರದ** ವಿದ್ಯಾರ್ಥಿಗಳು SSP ನಲ್ಲಿ ಅರ್ಜಿ ಸಲ್ಲಿಸಲು **NSP OTR Generate** ಮಾಡಿಕೊಳ್ಳುವುದು ಕಡ್ಡಾಯವಾಗಿದ್ದು. ಎಲ್ಲಾ ಪರಿಶಿಷ್ಟ ವರ್ಗದ ವಿದ್ಯಾಗಳಿಗೆ ಈ ಕುರಿತು ಮಾಹಿತಿ ನೀಡಿ ವಿದ್ಯಾರ್ಥಿಗಳು **NSP OTR Generate** ಮಾಡಿಕೊಂಡು ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸಿರುವ ಬಗ್ಗೆ ಖಾತ್ರಿ ಪಡಿಸಿಕೊಳ್ಳುವುದು.

8. ಸರ್ಕಾರದ ಆದೇಶ ಸಂಖ್ಯೆ:-ಸಕಇ 92 ಪಕವಿ 2025 (ಭಾ-)(2), ಬೆಂಗಳೂರು , ದಿನಾಂಕ:-09-05-2025 ರನ್ವಯ ಕುಟುಂಬದ ವಾರ್ಷಿಕ ಆದಾಯ ಗರಿಷ್ಟ ರೂ.10.00 ಲಕ್ಷಗಳವರೆಗೆ ಇರುವ **ಪರಿಶಿಷ್ಟ ಜಾತಿಯ** ಮೆಟ್ರಿಕ್ ನಂತರದ ವಿದ್ಯಾರ್ಥಿಗಳು ಖಾಸಗಿ ಕಾಲೇಜಿನಲ್ಲಿ ಮ್ಯಾನೇಜ್‌ಮೆಂಟ್ /ಎನ್ ಆರ್ ಐ ಕೋಟಾದಡಿ ಪ್ರವೇಶ ಪಡೆದಿದ್ದಲ್ಲಿ ಅಂತಹ ವಿದ್ಯಾರ್ಥಿಗಳಿಗೆ **[Private Seat in Private College (Payment Seat)]** ದರದಲ್ಲಿಯೇ ಭೋಧನಾ ಶುಲ್ಕವನ್ನು ಮರುಪಾವತಿ ಮಾಡಲು ಆದೇಶಿಸಲಾಗಿರುತ್ತದೆ. ಈ ಕುರಿತು ವಿದ್ಯಾರ್ಥಿಗಳಿಗೆ ಮಾಹಿತಿ ನೀಡಿ ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸಲು ಅಗತ್ಯ ಕ್ರಮ ವಹಿಸುವುದು.

9. ರಾಜ್ಯ ಮುಕ್ತ ವಿಶ್ವವಿದ್ಯಾಲಯಗಳಲ್ಲಿ ದೂರ ಶಿಕ್ಷಣದ ಮೂಲಕ ಪದವೀಧರ/ಸ್ನಾತಕೋತ್ತರ ಶಿಕ್ಷಣ ಪಡೆಯುವ ಪರಿಶಿಷ್ಟ ಜಾತಿ/ವರ್ಗದ ವಿದ್ಯಾರ್ಥೀಗಳಿಗೆ ವಿದ್ಯಾರ್ಥಿವೇತನವನ್ನು ಮಂಜೂರು ಮಾಡಲಾಗುತ್ತಿದ್ದು, ಸದರಿ ವಿಚಾರದ ಕುರಿತು ವಿದ್ಯಾರ್ಥಿಗಳಿಗೆ ತಿಳಿಸಿ, ಅರ್ಜಿಯನ್ನು ಸಲ್ಲಿಸಲು ಕ್ರಮವಹಿಸುವುದು.

10. ವಿದ್ಯಾರ್ಥಿವೇತನ ಮತ್ತು ಪ್ರೋತ್ಸಾಹಧನಕ್ಕೆ ಅರ್ಜಿಸಲ್ಲಿಸುವ ಸಂದರ್ಭದಲ್ಲಿ ಯಾವುದೇ ಸಮಸ್ಯೆ ಇದ್ದರೆ ವಿದ್ಯಾರ್ಥಿಗಳನ್ನು/ ಪೋಷಕರನ್ನು ಈ ಕಚೇರಿಗೆ ಕಳುಹಿಸದೇ, ಶಾಲೆಯ INO ಹಾಗೂ ಕಾಲೇಜಿನ Empowerment

CS CamScanner

Officer ಗಳು ತಾಲ್ಲೂಕು ಕಚೇರಿಯ ಸಿಬ್ಬಂದಿಯನ್ನು ಸಂಪರ್ಕಿಸಿ ಸಮಸ್ಯೆಯನ್ನು ಬಗೆಹರಿಸಿ ವಿದ್ಯಾರ್ಥಿಗಳಿಗೆ ಅರ್ಜಿ ಸಲ್ಲಿಸಲು ಸಹಕರಿಸುವುದು.

11. ಸರ್ಕಾರದ ಆದೇಶ ಸಂ:SWD/EDU/ED3/91/2023(com:1098854), ಬೆಂಗಳೂರು, ದಿನಾಂಕ:-03-07-2023. ಹಾಗೂ ಸರ್ಕಾರದ ಆದೇಶ ಸಂ:ಸಕಇ -ಎಸ್‌ಟಿಪಿ /108/2023, ದಿನಾಂಕ: 25-08-2023 ಗಳಲ್ಲಿ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನಕ್ಕೆ ಅರ್ಹತೆ ಪಡೆದಿರುವ ಪರಿಶಿಷ್ಟ ಜಾತಿ /ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳಿಗೆ ದಾಖಲಾತಿ ಸಮಯದಲ್ಲಿ ಯಾವುದೇ ಕಡ್ಡಾಯ ಶುಲ್ಕಗಳನ್ನು ಪಾವತಿ ಮಾಡುವಂತೆ ಒತ್ತಾಯಿಸದೇ ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶ ಕಲ್ಪಿಸುವುದು ಮತ್ತು ಇಲಾಖೆಯು DBT ಮೂಲಕ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ಮೊತ್ತವನ್ನು ಪಾವತಿಸಿದ ನಂತರ ಮಾಹಿತಿಯನ್ನು ಖಚಿತ ಪಡಿಸಿಕೊಂಡು ವಿದ್ಯಾರ್ಥಿಯಿಂದ ಸದರಿ ಮೊತ್ತವನ್ನು ಪಾವತಿ ಮಾಡಿಕೊಳ್ಳುವುದು.

**ಮೆಟ್ರಿಕ ಪೂರ್ವ, ಮೆಟ್ರಿಕ್ ನಂತರ & ಪ್ರೋತ್ಸಾಹಧನಕ್ಕೆ ಅರ್ಜಿ ಸಲ್ಲಿಸುವ ಸಂಬಂಧ ಮೇಲಿನ ಎಲ್ಲಾ ಅಂಶಗಳನ್ನು ಶಾಲಾ ಕಾಲೇಜಿನ ಮುಖ್ಯಸ್ಥರುಗಳು/ INO/ Empowerment Officer ಗಳು ಅಳವಡಿಸಿಕೊಂಡು ತಮ್ಮ ವಿದ್ಯಾಸಂಸ್ಥೆಯ ಎಲ್ಲಾ ಪರಿಶಿಷ್ಟ ಜಾತಿ ಮತ್ತು ವರ್ಗದ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸುವಂತೆ ಕ್ರಮವಹಿಸುವದು. ಒಂದು ವೇಳೆ ವಿದ್ಯಾರ್ಥಿಗಳಿಗೆ ಮಾಹಿತಿ ನೀಡದೇ ವಿದ್ಯಾರ್ಥಿವೇತನಕ್ಕೆ ನಿಗದಿತ ದಿನಾಂಕದೊಳಗೆ ಅರ್ಜಿ ಸಲ್ಲಿಕೆಯಾಗದೇ ವಿದ್ಯಾರ್ಥಿವೇತನ ಮಂಜೂರಾಗದೇ ಇದ್ದಲ್ಲಿ ಸಂಬಂಧಪಟ್ಟ ಶಾಲಾ ಕಾಲೇಜಿನ ಮುಖ್ಯಸ್ಥರುಗಳೇ ನೇರ ಹೊಣೆಗಾರರಾಗಿರುತ್ತೀರೆಂದು ಈ ಮೂಲಕ ತಮಗೆ ತಿಳಿಸಲಾಗಿದೆ.**

**ತಮ್ಮ ವಿಶ್ವಾಸಿ,**

18/6/26

**ಸಹಾಯಕ ನಿರ್ದೇಶಕರು ಗ್ರೇಡ್-1**
**ಸಮಾಜ ಕಲ್ಯಾಣ ಇಲಾಖೆ**
**ಬೆಂಗಳೂರು ದಕ್ಷಿಣ ತಾಲ್ಲೂಕು**

CamScanner